# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 247(378) |
| ಮಾನ್ಯ ಸದಸ್ಯರ ಹೆಸರು | : ಶ್ರೀ ಐವನ್ ಡಿ' ಸೋಜಾ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 29.01.2026 |
| ಉತ್ತರಿಸುವವರು | : ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:01.07.2022 ರಿಂದ 31.07.2024ರ ಅವಧಿಯಲ್ಲಿ ನಿವೃತ್ತರಾದ ಸರ್ಕಾರಿ ನೌಕರರಿಗೆ ಪಿಂಚಣಿಯನ್ನು 7ನೇ ವೇತನ ಆಯೋಗದ ಪ್ರಕಾರ ನೀಡುತ್ತಿದ್ದು, ನಿವೃತ್ತಿ ಪಿಂಚಣಿ ಉಪಲಬ್ಧಗಳಾದ ಡಿಸಿಆರ್‌ಜಿ ಕಮ್ಯುಟೇಶನ್ ಹಾಗೂ ಗಳಿಕೆ ರಜೆ ನಗದೀಕರಣಗಳನ್ನು 7ನೇ ವೇತನ ಆಯೋಗದ ವರದಿ ಶಿಫಾರಸ್ಸಿನ ಪ್ರಕಾರ ನೀಡದೇ 6ನೇ ವೇತನ ಆಯೋಗದ ಪ್ರಕಾರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ರಾಜಸ್ವ ನೀತಿಯನ್ನು ಗಮನದಲ್ಲಿರಿಸಿ ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಗಳನ್ನು ದಿನಾಂಕ:01.07.2022 ರಿಂದ ಅನ್ವಯಿಸುವಂತೆ ಪರಿಷ್ಕರಿಸಿ ದಿನಾಂಕ: 01.08.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. ಇದು ಸರ್ಕಾರದ ನೀತಿ ನಿರ್ಣಯವಾಗಿರುತ್ತದೆ. |
| ಆ) | ಈ ಬಗ್ಗೆ ಸಂಘಟನೆಗಳು ವ್ಯತ್ಯಾಸದ ಮೊತ್ತ ನೀಡಲು ಆಗ್ರಹಿಸಿ ಕಳೆದ 18 ತಿಂಗಳಿಂದ ಮುಷ್ಕರ ನಡೆಸುತ್ತಿರುವುದು ಹಾಗೂ ಖುದ್ದಾಗಿ ಹಲವು ಬಾರಿ ಮನವಿ ಮಾಡಿರುವುದು ಗಮನಕ್ಕೆ ಬಂದಿದೆಯೇ; | ಈ ಮೇಲಿನ ನಿರ್ಧಾರದಂತೆ ಅಂದರೆ, 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ದಿನಾಂಕ:01.08.2024 ರಿಂದ ಅನುಷ್ಠಾನಗೊಳಿಸಿರುವುದರಿಂದ, ದಿನಾಂಕ: 01.07.2022 ರಿಂದ ದಿನಾಂಕ:31.07.2024 ರ ಅವಧಿಯಲ್ಲಿನ ನಿವೃತ್ತರಾದ ನೌಕರರ ಪ್ರಕರಣಗಳಲ್ಲಿ, ನೌಕರರ ನಿವೃತ್ತಿ ಸಮಯದಲ್ಲಿ, ನಿಯಮಾನುಸಾರ ಲಭ್ಯವಿರುವ DCRG, ಪರಿವರ್ತಿತ ಪಿಂಚಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ಅವರು ಪಡೆಯುತ್ತಿರುವ 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿನ ಮೂಲ ವೇತನವನ್ನು ಆಧಾರವಾಗಿರಿಸಿ ಪಾವತಿ ಮಾಡತಕ್ಕದ್ದಾಗಿರುತ್ತದೆ. ಆದಾಗ್ಯೂ, ಈ ಅವಧಿಯಲ್ಲಿ ನಿವೃತ್ತರಾದ ನೌಕರರ ಪ್ರಕರಣಗಳಲ್ಲಿ, ಅವರ ಪಿಂಚಣಿಯನ್ನು 2024ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಕಾಲ್ಪನಿಕವಾಗಿ ನಿಗದಿಪಡಿಸಲಾದ ಮೂಲ ವೇತನವನ್ನು ಆಧಾರವಾಗಿರಿಸಿ ಹೆಚ್ಚಿನ ಪಿಂಚಣಿಯನ್ನು ದಿನಾಂಕ:01.08.2024 ರಿಂದ ಪಾವತಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಸರ್ಕಾರದ ಈ ನಿರ್ಧಾರವು ನೌಕರರಿಗೆ ಲಾಭದಾಯಕವಾಗಿರುತ್ತದೆ.<br><br>ಈ ಅವಧಿಯಲ್ಲಿನ ನಿವೃತ್ತ ನೌಕರರ ಮತ್ತು ದಿನಾಂಕ:01.08.2024ರ ನಂತರ ನಿವೃತ್ತರಾದ ನೌಕರರ ಪಿಂಚಣಿ ನಿಗದಿಯಲ್ಲಿ ಯಾವುದೇ ಅಸಮಾನತೆ ಉಂಟಾಗಿರುವುದಿಲ್ಲ. |

ಇ) ಸದರಿ ವ್ಯತ್ಯಾಸದ ಮೊತ್ತ ಪಾವತಿಗೆ ಎ, ಬಿ, ಸಿ, ಡಿ ಗ್ರೂಪ್ ವಾರು ಹಾಗೂ ಯಾವ ಯಾವ ಪಿಂಚಣಿ ಉಪಲಬ್ಧಗಳಿಗೆ ಎಷ್ಟು ಮೊತ್ತ ಬೇಕಾಗಬಹುದೆಂದು ಅಂದಾಜಿಸಲಾಗಿದೆ; ಹಾಗೂ ಈ ಅವಧಿಯಲ್ಲಿ ನಿವೃತರಾದ ಎ, ಬಿ, ಸಿ, ಡಿ ಗ್ರೂಪ್ ವಾರು ನೌಕರರ ಸಂಖ್ಯೆ ಎಷ್ಟು;

ದಿನಾಂಕ:01.07.2022 ರಿಂದ 31.07.2024 ಅವಧಿಯಲ್ಲಿ ನಿವೃತ್ತರಾದ ನೌಕರರ ಸಂಖ್ಯೆ ಈ ಕೆಳಕಂಡಂತಿರುತ್ತದೆ.

| | No. of retirees | | | | |
|---|---|---|---|---|---|
| | A | B | C | D | Total |
| 2022-23 | 537 | 1529 | 11093 | 1898 | 15057 |
| 2023-24 | 577 | 1375 | 11251 | 1594 | 14797 |
| 2024-25 | 518 | 1000 | 7454 | 1074 | 10046 |
| Total | 1632 | 3904 | 29798 | 4566 | 39900 |

*Retirees details from 1.4.2022 to 31.7.2024

ಈ) ದಿನಾಂಕ 01.08.2024ರಿಂದ ನಿವೃತ್ತರಾದ ನೌಕರರಿಗೆ 7ನೇ ವೇತನ ಆಯೋಗದಂತೆ, ಅದರ ಹಿಂದಿನ ದಿನಾಂಕದಿಂದ ನಿವೃತ್ತರಾದ ನೌಕರರಿಗೆ 6ನೇ ವೇತನ ಆಯೋಗದಂತೆ ಪಿಂಚಣಿ ಉಪಲಬ್ಧಗಳಾದ ಡಿಸಿಆರ್‌ಜಿ ಕಮ್ಯುಟೇಶನ್ ಹಾಗೂ ಗಳಿಕೆ ರಜೆ ನಗದೀಕರಣ ಸೌಲಭ್ಯ ನೀಡಿರುವುದರಿಂದ ಒಂದೇ ತೆರನಾದ ಕಾರ್ಯ ನಿರ್ವಹಿಸಿದ ನೌಕರರಲ್ಲಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ದಿನಾಂಕ:01.07.2022 ರಿಂದ 31.07.2024 ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ 7ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿಯಂತೆ ಡಿ.ಸಿ.ಆರ್.ಜಿ, ಕಮ್ಯುಟೇಶನ್ ಹಾಗೂ ಗಳಿಕೆ ರಜೆ ನಗಧೀಕರಣ ಸೌಲಭ್ಯಗಳನ್ನು ನೀಡಲು ಸರ್ಕಾರಕ್ಕೆ ತಗಲುವ ವ್ಯತ್ಯಾಸದ ಮೊತ್ತ ಈ ಕೆಳಕಂಡಂತಿರುತ್ತದೆ.

| ಅಂದಾಜು ವೆಚ್ಚ (ರೂ. ಕೋಟಿಗಳಲ್ಲಿ) | |
|---|---|
| ಡಿ.ಸಿ.ಆರ್.ಜಿ, | 1993.60 |
| ಗಳಿಕೆ ರಜೆ ನಗಧೀಕರಣ | 669.36 |
| ಕಮ್ಯುಟೇಶನ್ | 2370.58 |
| ಒಟ್ಟು ಮೊತ್ತ | 5033.54 |

ಉ) ಬಂದಿದ್ದಲ್ಲಿ, ಸದರಿ ವ್ಯತ್ಯಾಸದ ಮೊತ್ತವನ್ನು ನಿವೃತ್ತಿ ನೌಕರರಿಗೆ 2026-27ನೇ ಆಯವ್ಯಯದಲ್ಲಿ ಅನುದಾನ ನಿಗದಿಪಡಿಸಿಕೊಂಡು ಪಾವತಿಸಲಾಗುವುದೇ?

ಸಂಖ್ಯೆ:ಆಇ-ಪಿಇಎನ್/22/2026

(ಸಿದ್ದರಾಮಯ್ಯ)
ಮುಖ್ಯಮಂತ್ರಿ